**ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ಘನ ನ್ಯಾಯಾಲಯ ಬ್ಯಾಡಗಿ.**

**ಕ್ರಿಮಿನಲ್ ಪ್ರಕರಣ ಸಂಖ್ಯೆ 144/2019**

ಪಿಡಬ್ಲ್ಯೂ 9

ಸಿಡಬ್ಲ್ಯೂ 13

ಹೆಸರು : ಜಗದೀಶ ತಂದೆ ಚಂದ್ರಪ್ಪ ಬ್ಯಾಡಗಿ

ವಯಸ್ಸು : 46 ವರ್ಷ

ಉದ್ಯೋಗ : ಪೋಲೀಸ್ ಮುಖ್ಯ ಪೇದೆ,

ವಾಸಸ್ಥಳ : ಬ್ಯಾಡಗಿ

ದಿನಾಂಕ : 17.06.2023 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಎಪಿಪಿಯವರಿಂದ :**

1) ನಾನು ಜುಲೈ 2018 ರಿಂದ ಇಂದಿನವರೆಗೆ ಬ್ಯಾಡಗಿಯ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಮುಖ್ಯ ಪೇದೆಯೆಂದು ಕರ್ತವ್ಯ ನಿರ್ವಹಿಸುತ್ತೀದ್ದೇನೆ.

2) ದಿಃ 20.12.2018 ರಂದು ಚಾಸಾ-1 ರವರು ನೀಡಿದ ಗಣಕೀಕೃತ ಪಿರ್ಯಾಧಿಯನ್ನು ಸ್ವೀಕರಿಸಿಕೊಂಡು ಠಾಣಾ ಗುನ್ನಾ ಸಂಖ್ಯೆ 247/2018 ರಂತೆ ಪ್ರಕರಣವನ್ನು ದಾಖಲಿಸಿ ಪ್ರ.ವ. ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಮತ್ತು ನನ್ನ ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ. ಸಾಕ್ಷಿಯು ನಿಪಿ-1 ರ ಮೇಲಿನ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರ. ವ. ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-38 ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-38(ಎ) ಎಂದು ಗುರುತಿಸಲಾಯಿತು.

3) ನಂತರ ಚಾಸಾ-1 ರಿಂದ ಚಾಸಾ-3 ರವರನ್ನು ಕರೆದುಕೊಂಡು ಘಟನಾ ಸ್ಥಳಕ್ಕೆ ಕರೆದುಕೊಂಡು ಹೋಗಿ ಅಲ್ಲಿ ಚಾಸಾ-1 ರವರು ನೀಡಿದ ಮಾಹಿತಿಯಂತೆ ನಿಪಿ-2 ರಂತೆ ಪಂಚನಾಮೆ ಮಧ್ಯಾಹ್ನ 03-30 ರಿಂದ 04-30 ರವರೆಗೆ ಚಾಸಾ-2 ಮತ್ತು ಚಾಸಾ-3 ರವರ ಸಮಕ್ಷಮ ಪಂಚನಾಮೆಯನ್ನು ತಯಾರಿಸಿರುತ್ತೇವೆ. ನಿಪಿ-2 ರ ಮೇಲೆ ಇರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-2(ಡಿ) ಎಂದು ಗುರುತಿಸಲಾಯಿತು. ನಿಪಿ-3 ಹಾತ್ ನಕಾಶೆ ಮೇಲೆ ಇರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-3(ಡಿ) ಎಂದು ಗುರುತಿಸಲಾಯಿತು. ನಿಪಿ-4 ರಿಂದ ನಿಪಿ-9 ಭಾವಚಿತ್ರದಲ್ಲಿ ತನ್ನ ಇರುವಿಕೆಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಪಂಚನಾಮೆ ಕಾಲಕ್ಕೆ ವಶಪಡಿಸಿಕೊಂಡ ಮು. ಮಾ-1 ರಿಂದ ಮು.ಮಾ-3 ಗಳನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ.

4) ದಿಃ 28.12.2018 ರಂದು ನಾನು ಮತ್ತು ಚಾಸಾ-4, ಚಾಸಾ-2 ಮತ್ತು ಆರೋಪಿತರನ್ನು ಚಾಸಾ-14 ರವರು ಕೂಡಿಕೊಂಡು ಸರ್ಕಾರಿ ವಾಹನದಲ್ಲಿ ನಿಟ್ಟೂರು ಕಡೆಗೆ ಹೋಗಿ ಜೀಪ ನಿಲ್ಲಿಸಿ ಮುಂದೆ ಹೋಗಿ ಅಲ್ಲಿ ಕಬ್ಬಿನ ತೋಟದಲ್ಲಿ ರಟ್ಟಿನ ಬಾಕ್ಸಿನಲ್ಲಿ ಮುಚ್ಚಿಟ್ಟ 24 ಮೊಬೈಲಗಳು ಮತ್ತು 1 ನೇ ಆರೋಪಿತರ

ಎರಡು ಮೊಬೈಲಗಳು ಮತ್ತು 2 ನೇ ಆರೋಪಿತನ ಕಡೆ ಇದ್ದ ಒಂದು ಮೊಬೈಲಗಳನ್ನು ಚಾಸಾ-14 ರವರು ಜಪ್ತು ಪಡಿಸಿಕೊಂಡಿರುತ್ತಾರೆ. ಸದರಿ ಸ್ಥಳದಲ್ಲಿ ಕಟರನ್ನು ಜಪ್ತು ಪಡಿಸಿಕೊಂಡಿರುತ್ತಾರೆ. ಸದರಿ ಸ್ಥಳದಲ್ಲಿ ಬೆಳಗ್ಗೆ 10.00 ರಿಂದ 12.30 ಗಂಟೆಯ ನಡುವಿನ ಅವಧಿಯಲ್ಲಿ ಪಂಚನಾಮೆಯನ್ನು ಜರುಗಿಸಿ ಭಾವಚಿತ್ರಗಳನ್ನು ತೆಗೆದಿರುತ್ತಾರೆ. ಸಾಕ್ಷಿಯು ನಿಪಿ-29 ರಿಂದ ನಿಪಿ-32 ಭಾವಚಿತ್ರದಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಮಾನ್ಯ ನ್ಯಾಯಾಲಯದ ಮುಂದೆ ಹಾಜರುಪಡಿಸಿದ ಕಟರನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಅದನ್ನು ಮು. ಮಾ-2 ಎಂದು ಗುರುತಿಸಲಾಯಿತು. ಮುಂದಿನ ತನಿಖೆಗಾಗಿ ಸದರಿ ಪ್ರಕರಣದ ಕಡತವನ್ನು ಚಾಸಾ-14 ರವರಿಗೆ ಹಸ್ತಾಂತರಿಸಿರುತ್ತೇನೆ. ಆರೋಪಿತರಿಂದ ಜಪ್ತುಪಡಿಸಿಕೊಂಡ ಮೊಬೈಲಗಳನ್ನು ನೋಡಿದರೆ ಗುರುತಿಸುತ್ತೇನೆ. ಅವುಗಳನ್ನು ಈಗಾಗಲೇ ನಿಪಿ-21 ಎಂದು ಗುರುತಿಸಲ್ಪಟ್ಟಿರುತ್ತದೆ. ಸಾಕ್ಷಿಯ ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ.

**ಪಾಟೀ ಸವಾಲು : ಆರೋಪಿತರ ಪರ ವಕೀಲರಿಂದ :**

ಚಾಸಾ-1 ನಮ್ಮ ಠಾಣೆಗೆ ಬಂದು ದೂರನ್ನು ಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ. ನಂತರ ಸುಳ್ಳು ಪ್ರ. ವ. ವರದಿಯನ್ನು ತಯಾರಿಸಿ, ಮಾನ್ಯ ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ-2 ಮತ್ತು ಚಾಸಾ-3 ರವರು ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ, ಹಾತ್ ನಕಾಶೆ ತಯಾರಿಸಿರುವುದಿಲ್ಲ ಮತ್ತು ಮುದ್ದೆ ಮಾಲುಗಳನ್ನು ಜಪ್ತುಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿತರು ಘಟನಾ ಸ್ಥಳವನ್ನು ತೋರಿಸಿರುವುದಿಲ್ಲ ಮತ್ತು ನಾವು ಅಲ್ಲಿ ಪಂಚನಾಮೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಯಾವುದೇ ಮೊಬೈಲಗಳನ್ನು ಜಪ್ತುಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಯಾವುದೇ ಭಾವಚಿತ್ರಗಳನ್ನು ತೆಗೆದಿರುವುದಿಲ್ಲ ಎಂದರೆ ಸರಿಯಲ್ಲ. ಕೇವಲ ಈ ಪ್ರಕರಣಕ್ಕೆ ಅನೂಕುಲವಾಗಲೀ ಎನ್ನುವ ಉದ್ದೇಶದಿಂದ ಅಂಗಡಿಯಲ್ಲಿರುವ ಮೊಬೈಲಗಳ ಭಾವಚಿತ್ರಗಳನ್ನು ತೆಗೆದು ತನಿಖೆಯ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಮುಂದಿನ ತನಿಖೆಗಾಗಿ ಪ್ರಕರಣದ ಕಡತವನ್ನು ನನ್ನ ಮೇಲಾಧಿಕಾರಿಗಳಾದ ಚಾಸಾ– 14 ರವರಿಗೆ ಹಸ್ತಾಂತರಿಸಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತೀದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

( ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸ ಅದೆ.

ಸಹಿ/-

ಜೆಎಂಎಫ್‌ಸಿ, ಬ್ಯಾಡಗಿ.